**ಸಾಕ್ಷಿಯನ್ನು ದಿಃ 15.07.2026 ರಂದು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.**

**ಪಾಟೀ ಸವಾಲುಃ 3 ನೇ ಎದುರುದಾರರ ಪರ ವಕೀಲರಿಂದಃ**

1 ನೇ ಅರ್ಜಿದಾರರಾದ ಮಂಜುಳ ನನ್ನ ತಾಯಿ. ಅವರಿಗೆ 50 ವರ್ಷ ವಯಸ್ಸು. ನನಗೆ ಮದುವೆಯಾಗಿದೆ. ಮೈಸೂರಿನಲ್ಲಿ ವಾಸಿಸುತ್ತಿದ್ದೇನೆ. 3 ನೇ ಅರ್ಜಿದಾರರು ನನ್ನ ತಂಗಿ ಮದುವೆಯಾಗಿ ಗಂಡನ ಮನೆಯಲ್ಲಿದ್ದಾರೆ. 4 ನೇ ಅರ್ಜಿದಾರರು ನನ್ನ ತಮ್ಮ, ಪಿಯುಸಿ ಕಲಿತು ಏರ್ ಟೆಲ್ ಕಚೇರಿಯಲ್ಲಿ ಕೆಲಸ ಮಾಡುತ್ತಿದ್ದಾನೆ. ಮೃತರು ನನ್ನ ತಂದೆ. ಅಪಘಾತದ ದಿನ ನನ್ನ ತಂದೆ ಊಟಕ್ಕೆ ಎಂದು ಹೊರಗೆ ಹೋದವರು ಮನೆಗೆ ಬರುತ್ತಿದ್ದರು. ಅಪಘಾತದ ವಿಚಾರ 2.00 ಗಂಟೆಗೆ ನಮಗೆ ತಿಳಿಯಿತು. ಆ ಕೂಡಲೇ ಸ್ಥಳಕ್ಕೆ ಹೋಗಿದ್ದೇವೆ. ಆಗ ಅವರಿಗೆ ಜ್ಞಾನ ಇದ್ದರು ಮಾತನಾಡಲು ಆಗುತ್ತಿರಲಿಲ್ಲ. ಆ ಕೂಡಲೇ ಕಾವೇರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದೇವೆ. ಕಾವೇರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಿದ ವೈದ್ಯರ ಹೆಸರು ಹೇಳಲಾಗುವುದಿಲ್ಲ. ಕಾವೇರಿ ಆಸ್ಪತ್ರೆಯಿಂದ ಬಿಡುಗಡೆಯಾದಾಗ ನನ್ನ ತಂದೆ ಆರೋಗ್ಯವಾಗಿದ್ದರು ಎಂದರೆ ಸರಿ. ಮನೆಗೆ ಬಂದ ನಂತರ ಅವರು ಸಂಪೂರ್ಣ ವಿಶ್ರಾಂತಿಯಲ್ಲಿದ್ದರು. ಆ ನಂತರ ಆಪರೇಷನ್ ಆದ ಸ್ಥಳದಲ್ಲಿ infection ಆದ ಕಾರಣ ಕೆ.ಆರ್.ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದೇನೆ.

ಆಸ್ಪತ್ರೆಗೆ ಹೋಗುವ ಮಾರ್ಗದ ಮಧ್ಯೆ ಅವರು ತೀರಿಕೊಂಡರು. ಆಗ ಅವರಿಗೆ 75 ವರ್ಷ ವಯಸ್ಸಾಗಿತ್ತು ಎಂದರೆ 70 ವರ್ಷ ಆಗಿತ್ತು ಎನ್ನುತ್ತಾರೆ. ವಯಸ್ಸಾದ ಕಾರಣ ವಯೋಸಹಜ ಕಾಯಿಲೆಗಳು ಇದ್ದವು ಎಂದರೆ ಸರಿಯಲ್ಲ. ಅವರಿಗೆ ಸಕ್ಕರೆ ಕಾಯಿಲೆಯಿಂದಾಗಿ ಗಾಯದಲ್ಲಿ infection ಆಗಿ ತೀರಿಕೊಂಡಿದ್ದಾರೆ ಎಂದರೆ ಸರಿಯಲ್ಲ. ಅವರ ಉದ್ಯೋಗ ಮತ್ತು ಆದಾಯದ ಬಗ್ಗೆ ದಾಖಲೆ ಹಾಜರುಪಡಿಸಿಲ್ಲ. ಆಸ್ಪತ್ರೆಯ ಖರ್ಚು ವೆಚ್ಚದ ಬಗ್ಗೆ ದಾಖಲೆ ಹಾಜರುಪಡಿಸಿಲ್ಲ

ಎಂದರೆ ಸರಿಯಲ್ಲ. ಅಪಘಾತ ನನ್ನ ತಂದೆಯ ಅಜಾಗರೂಕತೆಯಿಂದ ಆಗಿದೆ ಎಂದರೆ ಸರಿಯಲ್ಲ. ಪರಿಹಾರಕ್ಕಾಗಿ ದಾಖಲೆಗಳನ್ನು ಸೃಷ್ಟಿಸಿ ಅರ್ಜಿ ಸಲ್ಲಿಸಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**1 ಮತ್ತು 2 ನೇ ಎದುರುದಾರರು ಹಾಗೂ ಅವರ ಪರ ವಕೀಲರನ್ನು ಕೂಗಿ ಕರೆಯಿಸಲಾಗಿ ಗೈರು ಹಾಜರಿದ್ದು, ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೇ.ಸರಿ ಇದೆ.**

**ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು**

**ಮತ್ತು ಎಂ.ಎ.ಸಿ.ಟಿ., ಮೈಸೂರು.**